ಅ) ಸುಮಾರು ಎರಡು ವರ್ಷಗಳಿಂದ ತೊಂದರೆಯಾಗಿತ್ತು.

ಆ) ಕಳೆದ ಸಾಲಿನಲ್ಲಿ (1996-97) ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾದ ಅಭ್ಯರ್ಥಿಗಳಿಂದ ಒಂಭತ್ತು ಹುದ್ದೆಗಳನ್ನು ಭರ್ತಿ ತುಂಬಲಾಗಿದೆ. ಉಳಿದಿರುವ ಖಾಲಿ ಹುದ್ದೆಗಳನ್ನು ಮಾಡಲು ಕ್ರಮ ಜರುಗಿಸಲು ಕಾಲೇಜು ಶಿಕ್ಷಣ ಆಯುಕ್ತರಿಗೆ ಸೂಚನೆಗಳನ್ನು ನೀಡಲಾಗಿದೆ.

ಹುಬ್ಬಳ್ಳಿಯಲ್ಲಿನ "ಕಿಮ್ಸ್" ಗೆ ಒದಗಿಸಿದ ಹಣ.

265 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿನಲ್ಲಿ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಸರಕಾರವು ಮಂಜೂರು ಮಾಡಿದ ಹಣವೆಷ್ಟು? ಅದರಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು?

ಆ) ಬಾಕಿಹಣ ಬಿಡುಗಡೆ ಮಾಡದೆ ಇರಲು ಕಾರಣಗಳೇನು? ಎಂದು ಬಿಡುಗಡೆ ಮಾಡಲಾಗುವುದು?

ಇ) 1997-98ನೇ ಸಾಲಿನಲ್ಲಿ ಸದರಿ ಆಸ್ಪತ್ರೆಗೆ ನಿಗದಿಪಡಿಸಿದ ಹಣವೆಷ್ಟು? ಅದನ್ನು ಎಂದು ಬಿಡುಗಡೆ ಮಾಡಲಾಗುವುದು?

ಡಾ॥ ಎಂ. ಶಂಕರ್‌ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಯೋಜನೆಯಲ್ಲಿ 3.00 ಲಕ್ಷಗಳು ಮತ್ತು ಯೋಜನೇತರದಲ್ಲಿ 532.49 ಲಕ್ಷಗಳನ್ನು ಒದಗಿಸಲಾಗಿದ್ದು, ಸದರಿ ಹಣವನ್ನು 1996-97ನೇ ಸಾಲಿನಲ್ಲಿ ಪೂರ್ತಿಯಾಗಿ ಬಿಡುಗಡೆ ಮಾಡಲಾಗಿದೆ.

ಆ) ಪ್ರಶ್ನೆಯ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ರೂ.669.56 ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ : ಆಕುಕ 186 ಎಂಎಸ್‌ಎಫ್ 97. ದಿನಾಂಕ : 20-6-97ರಲ್ಲಿ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಇಲ್ಲಿಗೆ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.357.555 ಲಕ್ಷಗಳನ್ನು ಯೋಜನೇತರದಲ್ಲಿ ಮತ್ತು ಯೋಜನೆಯಲ್ಲಿ 73.75 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಅದರಲ್ಲಿ ಕಿಮ್ಸ್ ಆಸ್ಪತ್ರೆಯ ಅನುದಾನವೂ ಸಹ ಸೇರಿರುತ್ತದೆ. ಉಳಿದ ಹಣವನ್ನು ತ್ರೈಮಾಸಿಕ ಕಂತಿನ ಆಧಾರದ ಮೇಲೆ ಬಿಡುಗಡೆ ಮಾಡಲಾಗುವುದು.

ಏಳನೇ ತರಗತಿಯ ವಿದ್ಯಾರ್ಥಿಗಳಿಗೆ ಪಬ್ಲಿಕ್ ಪರೀಕ್ಷೆ

266 - ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) *ಬೆಂಗಳೂರು ನಗರದಲ್ಲಿ 1997ನೇ ಮಾರ್ಚ್‌ನಲ್ಲಿ ನಡೆದ 7ನೇ ತರಗತಿಯ ಪಬ್ಲಿಕ್ ಪರೀಕ್ಷೆಗೆ ಕುಳಿತವರ ಸಂಖ್ಯೆ ಎಷ್ಟು?*

2) *ಇವರ ಪೈಕಿ ಎಷ್ಟು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ?*

3) *ಈ ರೀತಿ ಉತ್ತೀರ್ಣರಾದವರು ಮತ್ತೆ ತರಗತಿಗೆ ಹೋಗಬೇಕಾಗಿದೆಯೇ?*

4) *ಉತ್ತೀರ್ಣರಾದವರಲ್ಲಿ ಬಹಳ ವಿದ್ಯಾರ್ಥಿಗಳು ಪರಿಶಿಷ್ಟ ಜಾತಿ : ಪಂಗಡ ಹಾಗೂ ಬಡ ಕುಟುಂಬಕ್ಕೆ ಸೇರಿದವರೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

5) *ಹಾಗಿದ್ದಲ್ಲಿ ಈ ಉತ್ತೀರ್ಣರಾದವರೆಲ್ಲರೂ ತಮ್ಮ ವಿದ್ಯಾಭ್ಯಾಸವನ್ನು ಮತ್ತೆ ಮುಂದುವರಿಸುವ ಸಾಧ್ಯತೆ ಇಲ್ಲವೆಂದಬುದು ನಿಜವಲ್ಲವೇ?*

6) *ಹಾಗಿದ್ದಲ್ಲಿ ಮುಂದಿನ ವರ್ಷದಿಂದ 7ನೇ ತರಗತಿಗೆ ಪಬ್ಲಿಕ್ ಪರೀಕ್ಷೆಗಳನ್ನು ನಡೆಸುವುದನ್ನು ರದ್ದುಗೊಳಿಸಲು ಸರ್ಕಾರದವರು ಪರಿಶೀಲಿಸುವರೇ?*

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

1) 78,009

2) ಬಾಲಕರು - 3662
ಬಾಲಕಿಯರು - 2694

3) ಹೌದು

4) ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡ ಮತ್ತಿತರ ವರ್ಗದ ವಿದ್ಯಾರ್ಥಿಗಳಲ್ಲಿ ಶೇಕಡಾ 90ಕ್ಕೂ ಹೆಚ್ಚು ಉತ್ತೀರ್ಣರಾಗಿದ್ದಾರೆ

5) ಅನುತ್ತೀರ್ಣರಾದ ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನು ಮುಂದುವರಿಸಲು ಅವಕಾಶವಿರುತ್ತದೆ.

6) ಇಲ್ಲ.

ಕೊಳವೆ ಬಾವಿಗಳನ್ನು ದುರಸ್ತಿ ಮಾಡದಿರುವುದು

267 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗ್ರಾಮಾಂತರ ಪ್ರದೇಶದಲ್ಲಿರುವ ಕೆಟ್ಟಿರುವ ಕೊಳವೆ ಬಾವಿಗಳನ್ನು ದುರಸ್ತಿ ಮಾಡಲು ಗ್ರಾಮ ಪಂಚಾಯತಿಗಳಿಗೆ ವಹಿಸಿದ್ದರೂ ಹಣಕಾಸಿನ ಕೊರತೆಯಿಂದ ಕರ್ನಾಟಕ ರಾಜ್ಯದಾದ್ಯಂತ ಕೊಳವೆ ಬಾವಿಗಳು ದುರಸ್ತಿ ಕಾಣದೆ ಗ್ರಾಮಾಂತರ ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*